# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:25-01-2019.

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ರಾಜ್ಯದ ಎಲ್ಲಾ ಕಂದಾಯ ಉಪವಿಭಾಗಾಧಿಕಾರಿಗಳು,
ರಾಜ್ಯದ ಎಲ್ಲಾ ಕಂದಾಯ ಉಪವಿಭಾಗ.

ಮಾನ್ಯರೆ,

ವಿಷಯ: ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದ ರಿಟ್ ಅಪೀಲು ಸಂಖ್ಯೆ: 844/2018 ಹಾಗೂ ಇತರೆ ಸಂಬಂಧಿಸಿದ ರಿಟ್ ಅಪೀಲ್ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠ ಬೆಂಗಳೂರು ನೀಡಿರುವ ಅಂತಿಮ ಆದೇಶದ ಬಗ್ಗೆ.

ಉಲ್ಲೇಖ:
1) ರಿಟ್ ಅಪೀಲು ಸಂಖ್ಯೆ: 844/2018 ಹಾಗೂ ಇತರೆ ಸಂಬಂಧಿಸಿದ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ಅಂತಿಮ ಆದೇಶ ದಿನಾಂಕ:12-10-2018.
2) ಎಎಜಿ-1 ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರುರವರ ಅಭಿಪ್ರಾಯ ಪತ್ರ ಸಂಖ್ಯೆ: 1940/ಎಜಿಬಿ/18-19, ದಿನಾಂಕ:23-11-2018.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಮಾನ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠವು ಅವಿಶ್ವಾಸ ನಿರ್ಣಯಕ್ಕೆ ಸಂಬಂಧಿಸಿದಂತೆ ರಿಟ್ ಅಪೀಲ್ ಸಂಖ್ಯೆ: 844/2018 ಹಾಗೂ ಇತರೆ ಸಂಬಂಧಿಸಿದ ಪ್ರಕರಣಗಳಲ್ಲಿ ದಿನಾಂಕ: 12-10-2018ರಂದು ಅಂತಿಮ ಆದೇಶ ನೀಡಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ವಿಭಾಗಿಯ ಪೀಠವು ನೀಡಿರುವ ಅಂತಿಮ ಆದೇಶದ ಬಗ್ಗೆ ಅಡಿಷನಲ್ ಅಡ್ವೋಕೇಟ್ ಜನರಲ್‌ರವರಿಂದ ಅಭಿಪ್ರಾಯ ಪಡೆಯಲಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಕಲಂ 49ರಡಿಯ ಉಪಬಂಧ(1) ಮತ್ತು (2) ಪ್ರತ್ಯೇಕವಾಗಿದ್ದು, ಉಪಬಂಧ(1)ರಡಿ ಅವಿಶ್ವಾಸ ನಿರ್ಣಯವನ್ನು 30 ತಿಂಗಳ ನಂತರ ತರಲು ಯಾವುದೇ ಆಪಾದನೆಗಳ ಅವಶ್ಯಕತೆ ಇರುವುದಿಲ್ಲವೆಂದು ಹಾಗೂ ಉಪಬಂಧ(2)ರಡಿ ಅವಿಶ್ವಾಸ ರ್ಣಯವನ್ನು ತರಬೇಕಾದರೆ ನಿರ್ದಿಷ್ಟ ನಿಯಮಗಳನ್ನು ಹೊಸದಾಗಿ ರಚಿಸಬೇಕಾಗುತ್ತದೆ ಎಂದು ಮಾನ್ಯ ನ್ಯಾಯಾಲಯವು ಆದೇಶಿಸಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ಆದೇಶದ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯವನ್ನು ಪ್ರಕರಣ 49(1)ರಡಿ ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರು ಆಯ್ಕೆಯಾದ 30 ತಿಂಗಳ ನಂತರ ತರಲು ಅವರುಗಳ ವಿರುದ್ಧ ಆಪಾದನೆಗಳ ಅವಶ್ಯಕತೆ ಇರುವುದಿಲ್ಲ. ಪ್ರಕರಣ 49(2)ರಡಿ ಅವಿಶ್ವಾಸ ನಿರ್ಣಯ ಮಂಡನೆಯ ಬಗ್ಗೆ ಸರ್ಕಾರವು ನಿಯಮಗಳನ್ನು ರಚಿಸಿದ ನಂತರ ಅವಿಶ್ವಾಸ ನಿರ್ಣಯ ಪ್ರಸ್ತಾವನೆಗಳನ್ನು ಪರಿಗಣಿಸಬಹುದಾಗಿದೆ.

ಮೇಲಿನಂತೆ ಕ್ರಮವಹಿಸಲು ಸಂಬಂಧಿಸಿದವರಿಗೆಲ್ಲಾ ಸ್ಪಷ್ಟಪಡಿಸಿದೆ.

ತಮ್ಮ ವಿಶ್ವಾಸಿ

25/1/19

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು:

1) ಜಿಲ್ಲಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
2) ರಾಜ್ಯದ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು.
3) ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
4) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
5) ಗಣಕ ಕೋಶ(ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.